ದಿನಾಂಕ 17-2-2014 ರಂದು ಕೊಠಡಿ ಸಂ. 252. ಬಹುಮಹಡಿ ಕಟ್ಟಡ, ಬೆಂಗಳೂರಿನಲ್ಲಿ ಜರುಗಿದ ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ವ್ಯವಸ್ಥಾಪನಾ ಮಂಡಳಿಯ ಹದಿನೆಂಟನೇಯ ಸಭೆಯ ನಡುವಳಿಗಳು:

ಉಪಸ್ಥಿತರಿದ್ದ ಸದಸ್ಯರು:

| | | |
|---|---|---|
| 1. | ಡಾ. ಬಿ.ವಿ. ಪಾಟೀಲ | ಅಧ್ಯಕ್ಷರು |
| 2. | ಶ್ರೀ ಶ್ರೀ ಭರತ್‌ಲಾಲ್ ಮೀನಾ | ಸದಸ್ಯರು |
| 3. | ಶ್ರೀ ಸುಭೋದ್ ಯಾದವ್ | ಸದಸ್ಯರು |
| 4. | ಶ್ರೀ ಹೆಚ್.ಆರ್. ನಾಗೇಂದ್ರ | ಸದಸ್ಯರು |
| 5. | ಶ್ರೀ ಹೆಚ್.ಎಸ್. ಸಾದತ್ ಅಲಿ ಖಾನ್ | ಸದಸ್ಯರು |
| 6. | ಶ್ರೀ ಪ್ರವೀಣ ವಿ. ನಾಯಕ್ | ಸದಸ್ಯರು |
| 7. | ಶ್ರೀಮತಿ ನಫೀಸ್ ಫಾತಿಮಾ | ಸದಸ್ಯರು |
| 8. | ಡಾ. ಪಿ. ಬಾಲಕೃಷ್ಣನ್ | ಸದಸ್ಯರು |
| 9. | ಡಾ. ಬಿ.ಎಸ್. ಜನಗೌಡರ್ | ಸದಸ್ಯ–ಕಾರ್ಯದರ್ಶಿ |
| 10. | ಶ್ರೀ ಲೋಕನಾಥ | ಆಹ್ವಾನಿತರು |

ಪ್ರಾರಂಭದಲ್ಲಿ, ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ಮಾನ್ಯ ವ್ಯವಸ್ಥಾಪನಾ ಮಂಡಳಿಯ ಹದಿನೆಂಟನೇಯ ಸಭೆಗೆ ಸರ್ವಸದಸ್ಯರನ್ನು ಮತ್ತು ಆಹ್ವಾನಿತರನ್ನು ಮಾನ್ಯ ಕುಲಪತಿಗಳು ಹಾಗೂ ಸಭಾಧ್ಯಕ್ಷರು ಸ್ವಾಗತ ಕೋರಿದರು. ತದನಂತರ, ಕಾರ್ಯಸೂಚಿಯ ಪ್ರಕಾರ ಚರ್ಚಿಸಿ ಕೆಳಕಂಡಂತೆ ತೀರ್ಮಾನಗಳನ್ನು ಕೈಗೊಳ್ಳಲಾಯಿತು.

**ಐಟಂ–1 ದಿನಾಂಕ 21-12-2013 ರಂದು ಜರುಗಿದ ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ಮಾನ್ಯ ವ್ಯವಸ್ಥಾಪನಾ ಮಂಡಳಿಯ ಹದಿನೇಳನೇಯ ಸಭೆಯ ನಡುವಳಿಗಳನ್ನು ಸ್ಥಿರೀಕರಿಸುವುದು**

**ಠರಾವು:**

ದಿನಾಂಕ 21-12-2013 ರಂದು ಜರುಗಿದ ಮಾನ್ಯ ವ್ಯವಸ್ಥಾಪನಾ ಮಂಡಳಿಯ ಹದಿನೇಳನೇಯ ಸಭೆಯ ನಡುವಳಿಕೆಗಳನ್ನು ಓದಲಾಯಿತೆಂದು ಪರಿಗಣಿಸಿ, ಸ್ಥಿರೀಕರಿಸಲಾಯಿತು.

**ಐಟಂ–2 ದಿನಾಂಕ 21-12-2013 ರಂದು ಜರುಗಿದ ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ಮಾನ್ಯ ವ್ಯವಸ್ಥಾಪನಾ ಮಂಡಳಿಯ ಹದಿನೇಳನೇಯ ಸಭೆಯ ನಡುವಳಿಗಳ ಪ್ರಕಾರ ಕೈಗೊಂಡ ಕ್ರಮಗಳಿಗೆ ಅನುಮೋದನೆ ನೀಡುವುದು**

**ಠರಾವು:**

ದಿನಾಂಕ 21-12-2013 ರಂದು ಜರುಗಿದ ಮಾನ್ಯ ವ್ಯವಸ್ಥಾಪನಾ ಮಂಡಳಿಯ ಹದಿನೇಳನೇಯ ಸಭೆಯ ನಡುವಳಿಕೆಗಳ ಪ್ರಕಾರ ಕೈಕೊಂಡ ಕ್ರಮಗಳಿಗೆ ಮಾನ್ಯ ವ್ಯವಸ್ಥಾಪನಾ ಮಂಡಳಿಯು ಅನುಮೋದನೆ ನೀಡಿತು.

**ಐಟಂ–3 ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ನಾಲ್ಕನೇಯ ಘಟಿಕೋತ್ಸವದಲ್ಲಿ ಅರ್ಹ ಅಭ್ಯರ್ಥಿಗಳಿಗೆ ಸ್ನಾತಕ ಪದವಿಗಳ ಪ್ರದಾನ ಕುರಿತು**

**ಠರಾವು:**

ಚರ್ಚೆಯ ನಂತರ, ಅರ್ಹ ಅಭ್ಯರ್ಥಿಗಳಿಗೆ ಸ್ನಾತಕ ಪದವಿಗಳನ್ನು ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ನಾಲ್ಕನೇಯ ಘಟಿಕೋತ್ಸವದಲ್ಲಿ ಪ್ರದಾನ ಮಾಡಲು ಘನ ವೇದಿಕೆಯು ಅನುಮೋದನೆ ನೀಡಿತು.

(ಕ್ರಮ: ಕುಲಸಚಿವರು)

**ಐಟಂ–4 ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ನಾಲ್ಕನೇಯ ಘಟಿಕೋತ್ಸವದಲ್ಲಿ ಅರ್ಹ ಅಭ್ಯರ್ಥಿಗಳಿಗೆ ಸ್ನಾತಕೋತ್ತರ ಪದವಿಗಳ ಪ್ರದಾನ ಕುರಿತು**

**ಠರಾವು:**

ಚರ್ಚೆಯ ನಂತರ, ಅರ್ಹ ಅಭ್ಯರ್ಥಿಗಳಿಗೆ ಸ್ನಾತಕೋತ್ತರ ಪದವಿಗಳನ್ನು ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ನಾಲ್ಕನೇಯ ಘಟಿಕೋತ್ಸವದಲ್ಲಿ ಪ್ರದಾನ ಮಾಡಲು ಘನ ವೇದಿಕೆಯು ಅನುಮೋದನೆ ನೀಡಿತು. (ಕ್ರಮ: ಕುಲಸಚಿವರು)

**ಐಟಂ–5 ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ನಾಲ್ಕನೇಯ ಘಟಿಕೋತ್ಸವದಲ್ಲಿ ಅರ್ಹ ವಿದ್ಯಾರ್ಥಿಗಳಿಗೆ ಬಂಗಾರದ ಪದಕ ಮತ್ತು ನಗದು ಬಹುಮಾನ/ಬಹುಮಾನಗಳನ್ನು ನೀಡುವ ಕುರಿತು**

**ಠರಾವು:**

ಚರ್ಚೆಯ ನಂತರ, 10 ಕೃವಿವಿ ಬಂಗಾರದ ಪದಕಗಳನ್ನು ಅರ್ಹ ಸ್ನಾತಕೋತ್ತರ ಅಭ್ಯರ್ಥಿಗಳಿಗೆ ಹಾಗೂ 3 ಕೃವಿವಿ ಬಂಗಾರದ ಪದಕಗಳನ್ನು ಸ್ನಾತಕ ಅಭ್ಯರ್ಥಿಗಳಿಗೆ, 14 ಖಾಸಗಿ–ವೈಯಕ್ತಿಕ / ಏಜೆನ್ಸಿಯ ಬಂಗಾರದ ಪದಕಗಳು, 2 ಖಾಸಗಿ ನಗದು ಬಹುಮಾನ / ಬಹುಮಾನಗಳನ್ನು ವಿಶ್ವವಿದ್ಯಾಲಯದ ವಿವಿಧ ಮಹಾವಿದ್ಯಾಲಯಗಳಲ್ಲಿಯ ಅರ್ಹ ಅಭ್ಯರ್ಥಿಗಳಿಗೆ ನೀಡಲು ಘನ ವೇದಿಕೆಯು ಅನುಮೋದನೆ ನೀಡಿತು. (ಕ್ರಮ : ಕುಲಸಚಿವರು)

**ಐಟಂ–6 ಅತ್ಯುತ್ತಮ ಬೋಧಕ /ವಿಜ್ಞಾನಿಗಳು ಮತ್ತು ಸೇವಾ ಸಿಬ್ಬಂದಿ /ಸಂಶೋಧನಾ ಕೇಂದ್ರ ಹಾಗೂ ಸಂಶೋಧನಾ ಯೋಜನೆಗಳನ್ನು ಪಡೆಯುವ ವಿಜ್ಞಾನಿಗಳಿಗೆ ಪ್ರೋತ್ಸಾಹ ಧನ /ಅತ್ಯುತ್ತಮ ರೈತ ವಿಜ್ಞಾನಿ ಪ್ರಶಸ್ತಿಗಳನ್ನು ಹಾಗೂ ಪ್ರೋತ್ಸಾಹಧನ ಪಡೆಯುವವರ ಪಟ್ಟಿಗೆ ಅನುಮೋದನೆ ಕುರಿತು**

**ಠರಾವು:**

ವಿಸ್ತೃತ ಚರ್ಚೆಯ ನಂತರ, ಅತ್ಯುತ್ತಮ ಬೋಧಕ / ವಿಜ್ಞಾನಿಗಳು ಮತ್ತು ಸೇವಾ ಸಿಬ್ಬಂದಿ / ಸಂಶೋಧನಾ ಕೇಂದ್ರ / ರೈತ ವಿಜ್ಞಾನಿ ಪ್ರಶಸ್ತಿಗಳನ್ನು ಹಾಗೂ ಸಂಶೋಧನಾ ಯೋಜನೆಗಳನ್ನು ಪಡೆಯುವ ವಿಜ್ಞಾನಿಗಳಿಗೆ ಪ್ರೋತ್ಸಾಹ ಧನ ಪಡೆಯುವವರ ಯಾದಿಗೆ ಘನ ವೇದಿಕೆಯು ಅನುಮೋದನೆ ನೀಡಿತು.

ಮುಂದುವರೆದು, ಬಾಹ್ಯ ಸಂಸ್ಥೆಗಳಿಂದ ಅನುದಾನಿತ ಯೋಜನೆಗಳನ್ನು ಪಡೆಯುವಂತಹ ವಿಜ್ಞಾನಿಗಳಿಗೆ ಇನ್ನೂ ಹೆಚ್ಚಿನ ಯೋಜನೆಗಳನ್ನು ಪಡೆಯಲು ಪ್ರೋತ್ಸಾಹಿಸುವ ಸಲುವಾಗಿ ಕನಿಷ್ಠ ಪಕ್ಷ ಯೋಜನೆಯ ಅನುದಾನದ ಶೇಕಡ 1 ರಷ್ಟು ಪ್ರೋತ್ಸಾಹ ಧನ ನೀಡುವಂತಾಗಲು ಪ್ರೋತ್ಸಾಹ ಧನದ ಮೊತ್ತವನ್ನು ಹೆಚ್ಚಿಸಲು ಪ್ರಧಾನ ಕಾರ್ಯದರ್ಶಿಗಳು ಸಲಹೆ ನೀಡಿದರು. ಉತ್ತಮ ಕಾರ್ಯನಿರ್ವಹಿಸಿದ ವಾರ್ಡನ್ ಅವರಿಗೂ ಸಹ ಪ್ರಶಸ್ತಿ ನೀಡಲು ನಿರ್ಧರಿಸಲಾಯಿತು. (ಕ್ರಮ : ಕುಲಸಚಿವರು)

**ಐಟಂ–7 ಕೃಷಿ ವಿಶ್ವವಿದ್ಯಾಲಯ ರಾಯಚೂರಿನಲ್ಲಿ ಸ್ನಾತಕ ಪದವಿ ಕೋರ್ಸ್‌ಗಳಿಗಾಗಿ ವಿಶ್ವವಿದ್ಯಾಲಯದ ಕೇಂದ್ರೀಕೃತ ಪರೀಕ್ಷಾ ಕೇಂದ್ರದ ಸ್ಥಾಪನೆ ಕುರಿತು**

**ಠರಾವು:**

ದೀರ್ಘ ಚರ್ಚೆಯ ನಂತರ, ಕೃಷಿ ವಿಶ್ವವಿದ್ಯಾಲಯ ರಾಯಚೂರಿನಲ್ಲಿ ಸ್ನಾತಕ ಪದವಿ ಕೋರ್ಸ್‌ಗಳಿಗಾಗಿ ವಿಶ್ವವಿದ್ಯಾಲಯದ ಕೇಂದ್ರೀಕೃತ ಪರೀಕ್ಷಾ ಕೇಂದ್ರದ ಸ್ಥಾಪನೆಯ ಪ್ರಸ್ತಾವನೆಗೆ ಅನುಮೋದನೆ ನೀಡಲಾಯಿತು.

ಆದಾಗ್ಯೂ, ಪರೀಕ್ಷಾ ಕೇಂದ್ರದ ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಪ್ರೋತ್ಸಾಹಿಸುವ ಸಲುವಾಗಿ ಕೃವಿವಿ ಬೆಂಗಳೂರು ಹಾಗೂ ಸಿ.ಇ.ಟಿ. ಸೆಲ್ ಅವರಿಂದ ಮಾಹಿತಿಯನ್ನು ಪಡೆದುಕೊಳ್ಳುವಂತೆ ಪ್ರಧಾನ ಕಾರ್ಯದರ್ಶಿಗಳು ಸಲಹೆ ನೀಡಿದರು. (ಕ್ರಮ : ಕುಲಸಚಿವರು)

ಐಟಂ–8 **ಕೃಷಿ ವಿಶ್ವವಿದ್ಯಾಲಯ ರಾಯಚೂರಿನಲ್ಲಿ ಬಿ.ಟೆಕ್. (ಆಹಾರ ತಂತ್ರಜ್ಞಾನ) ಪದವಿ ಕಾರ್ಯಕ್ರಮವನ್ನು 2014–15 ನೇ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸುವ ಕುರಿತು**

**ಠರಾವು:**

ವಿಸ್ತೃತ ಚರ್ಚೆಯ ನಂತರ, ಕೃಷಿ ವಿಶ್ವವಿದ್ಯಾಲಯ ರಾಯಚೂರಿನಲ್ಲಿ ಬಿ.ಟೆಕ್. (ಆಹಾರ ತಂತ್ರಜ್ಞಾನ) ಪದವಿ ಕಾರ್ಯಕ್ರಮವನ್ನು 2015–16 ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲು ಅನುಮೋದನೆ ನೀಡಲಾಯಿತು. ಪ್ರಸ್ತಾವಿತ ಪದವಿ ಕಾರ್ಯಕ್ರಮಕ್ಕಾಗಿ ಶಿಕ್ಷಕೇತರ ಸಿಬ್ಬಂದಿಯವರ ಸಂಖ್ಯೆಯನ್ನು ಕಡಿತಗೊಳಿಸಲು ಮತ್ತು ಸರಕಾರದ ಅನುಮೋದನೆ ಪಡೆಯಲು ಶಿಕ್ಷಕ ಹಾಗೂ ಶಿಕ್ಷಕೇತರ ಸಿಬ್ಬಂದಿಯವರ ಹುದ್ದೆಗಳ ವಿವರಗಳನ್ನು ಸಲ್ಲಿಸಲು ಮಾನ್ಯ ವ್ಯವಸ್ಥಾಪನಾ ಮಂಡಳಿಯ ಸದಸ್ಯರು ಸಲಹೆ ನೀಡಿದರು. ಅಲ್ಲದೆ, ಅವಶ್ಯವಿರುವ ಸಂದರ್ಭದಲ್ಲಿ ಹೊರಗುತ್ತಿಗೆ ಪಡೆದು ಸಿಬ್ಬಂದಿಯವರ ಸಂಖ್ಯೆಯನ್ನು ಕಡಿತಗೊಳಿಸಲು ಸಹ ಸಲಹೆ ನೀಡಿದರು.

(ಕ್ರಮ : ಕುಲಸಚಿವರು)

ಐಟಂ–9 **ಕೃಷಿ ವಿಶ್ವವಿದ್ಯಾಲಯ ರಾಯಚೂರಿನ 2008–09, 2009–10 ಮತ್ತು 2010–11 ನೇ ಸಾಲಿನ ಲೆಕ್ಕ ಪರಿಶೋಧಿತ ವಾರ್ಷಿಕ ಖರ್ಚು–ವೆಚ್ಚಗಳು, ಲೆಕ್ಕ ಪರಿಶೋಧನಾ ವರದಿಗಳು ಹಾಗು ಅನುಸರಣಾ ವರದಿಗಳಿಗೆ ಅನುಮೋದನೆ ಕುರಿತು.**

**ಠರಾವು:**

ವಿಸ್ತೃತ ಚರ್ಚೆಯ ನಂತರ, ಕೃಷಿ ವಿಶ್ವವಿದ್ಯಾಲಯ ರಾಯಚೂರಿನ 2008–09, 2009–10 ಮತ್ತು 2010–11 ನೇ ಸಾಲಿನ ಲೆಕ್ಕ ಪರಿಶೋಧಿತ ವಾರ್ಷಿಕ ಖರ್ಚು–ವೆಚ್ಚಗಳು, ಲೆಕ್ಕ ಪರಿಶೋಧನಾ ವರದಿಗಳು ಹಾಗು ಅನುಸರಣಾ ವರದಿಗಳಿಗೆ ಅನುಮೋದನೆ ನೀಡಲಾಯಿತು.

1986–87 ರಿಂದ 2008–2009 ರ ವರೆಗಿನ ಬಾಕಿ ಇರುವ ಲೆಕ್ಕ ಪರಿಶೋಧನಾ ಅನುಸರಣಾ ವರದಿಗಳನ್ನು ಸಿದ್ಧಪಡಿಲಾಗಿರುತ್ತದೆ ಹಾಗೂ ಅವುಗಳ ಆಕ್ಷೇಪಣೆ ಖಂಡಿಕೆಗಳು ರಾಜ್ಯ ಲೆಕ್ಕಪತ್ರ ಇಲಾಖೆ, ಬೆಂಗಳೂರು ಅವರಿಂದ ತೀರುವಳಿ ಆಗಬೇಕಾಗಿದೆಯೆಂದು ಮಾನ್ಯ ಕುಲಪತಿಗಳವರು ಘನ ವೇದಿಕೆಯ ಅವಗಾಹನೆಗೆ ತಂದರು. ಈ ಕುರಿತು, ನಿಯಂತ್ರಕರು, ರಾಜ್ಯ ಲೆಕ್ಕಪತ್ರ ಇಲಾಖೆ, ಬೆಂಗಳೂರು ಇವರಿಗೆ ಬಾಕಿ ಇರುವ ಆಕ್ಷೇಪಣೆ ಖಂಡಿಕೆಗಳನ್ನು ಪರಿಶೀಲಿಸಿ ತೀರುವಳಿಗೊಳಿಸುವ ಸಲುವಾಗಿ ಲೆಕ್ಕಪರಿಶೋಧನಾ ತಂಡವನ್ನು ನಿಯೋಜಿಸಲು ಪತ್ರಗಳ ಮುಖಾಂತರ ಬಹಳಷ್ಟು ಸಲ ವಿನಂತಿಸಿಕೊಳ್ಳಲಾಗಿರುತ್ತದೆ. ಮುಂದುವರೆದು, ಈ ಸಂಬಂಧವಾಗಿ ನಿಯಂತ್ರಕರು, ರಾಜ್ಯ ಲೆಕ್ಕಪತ್ರ ಇಲಾಖೆ, ಬೆಂಗಳೂರು ಇವರಿಗೆ ಈ ಕುರಿತು ಕ್ರಮಕೈಗೊಳ್ಳಲು ತಿಳಿಸುವಂತೆ ಕುಲಪತಿಗಳವರು ಪ್ರಧಾನ ಕಾರ್ಯದರ್ಶಿಗಳವರಲ್ಲಿ ವಿನಂತಿಸಿಕೊಂಡರು.

ಆದಾಗ್ಯೂ, 1986–87 ರಿಂದ 2008–2009 ರ ವರೆಗಿನ ಬಾಕಿ ಇರುವ ಲೆಕ್ಕ ಪರಿಶೋಧನಾ ವರದಿಯ ತೀರುವಳಿಗಳನ್ನು ಆದಷ್ಟು ಬೇಗನೆ ಮುಕ್ತಗೊಳಿಸಿಕೊಳ್ಳುವಂತೆ ಸಲಹೆ ನೀಡಲಾಯಿತು.

(ಕ್ರಮ : ಹಣಕಾಸು ನಿಯಂತ್ರಣಾಧಿಕಾರಿಗಳು)

ಐಟಂ–10 **ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ವಿವಿಧ ಆವರಣಗಳಲ್ಲಿ ಹತ್ತು ಲಕ್ಷ ರೂಪಾಯಿಗಳಿಗೆ ಮೀರಿದ ಟೆಂಡರ್ ಮಾಡಿದ ಸಿವಿಲ್ ಕಾಮಗಾರಿಗಳನ್ನು ಕೈಗೊಳ್ಳಲು ಅನುಮೋದನೆ ಕುರಿತು.**

**ಠರಾವು:**

ವಿಸ್ತೃತ ಚರ್ಚೆಯ ನಂತರ, ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ವಿವಿಧ ಆವರಣಗಳಲ್ಲಿ ಹತ್ತು ಲಕ್ಷ ರೂಪಾಯಿಗಳಿಗೆ ಮೀರಿದ ಟೆಂಡರ್ ಮಾಡಿದ ಸಿವಿಲ್ ಕಾಮಗಾರಿಗಳನ್ನು ಕೈಗೊಳ್ಳುವ ಪ್ರಸ್ತಾವನೆಗೆ ಮಾನ್ಯ ವ್ಯವಸ್ಥಾಪನಾ ಮಂಡಳಿಯು ಅನುಮೋದನೆ ನೀಡಿತು.

ಎಸ್.ಎಲ್.ಎಸ್.ಸಿ.ಯ ಅನುಮೋದನೆ ದೊರೆತ ತಕ್ಷಣ ಆರ್.ಕೆ.ವಿ.ವೈ.ಅಡಿ ವೃದ್ಧಿಸಲಾಗುತ್ತಿರುವ

ಸೌಲಭ್ಯಗಳನ್ನು ಕೈಗೊಳ್ಳುವ ಸಲುವಾಗಿ ಅವುಗಳ ಪೂರ್ವಯೋಜಿತ ಯೋಜನೆಗಳನ್ನು ಸಿದ್ಧಪಡಿಸಿಟ್ಟುಕೊಳ್ಳಲು ಕೃಷಿ ಆಯುಕ್ತರು ಸಲಹೆ ನೀಡಿದರು.

(ಕ್ರಮ : ಸಂಶೋಧನಾ ನಿರ್ದೇಶಕರು /ಕಾರ್ಯನಿರ್ವಾಹಕ ಅಭಿಯಂತರರು)

**ಐಟಂ–11 ಹತ್ತು ಲಕ್ಷ ರೂಪಾಯಿಗಳಿಗೆ ಮೀರಿದ ಪ್ರಯೋಗಾಲಯ ಉಪಕರಣಗಳನ್ನು ಖರೀದಿಸಲು ಅನುಮೋದನೆ ಕುರಿತು.**

**ಠರಾವು:**

ವಿವರವಾದ ಚರ್ಚೆಯ ನಂತರ, ಹತ್ತು ಲಕ್ಷ ರೂಪಾಯಿಗಳಿಗೆ ಮೀರಿದ ಪ್ರಯೋಗಾಲಯ ಉಪಕರಣಗಳನ್ನು ಖರೀದಿಸುವ ಯಾದಿಗೆ ಮಾನ್ಯ ವ್ಯವಸ್ಥಾಪನಾ ಮಂಡಳಿಯು ಅನುಮೋದನೆ ನೀಡಿತು.

(ಕ್ರಮ : ಸರಕು ಖರೀದಿ ಅಧಿಕಾರಿಗಳು)

**ಐಟಂ–12 2013–14 ನೇ ಸಾಲಿನ ಪರಿಷ್ಕೃತ ವಿವಿಧ ಬೀಜೋತ್ಪಾದನಾ ಕಾರ್ಯಕ್ರಮಗಳು ಮತ್ತು ಬೀಜ ಗ್ರಾಮ ಯೋಜನೆಗಳು ಹಾಗೂ 2014–15 ಸಾಲಿನ ವಿವಿಧ ಬೀಜೋತ್ಪಾದನಾ ಕಾರ್ಯಕ್ರಮಗಳ ಯೋಜನೆಗಳ ಅನುಷ್ಠಾನಕ್ಕೆ ಬೇಕಾಗುವ ಹಣಕಾಸಿನ ಅನುಮೋದನೆ ಕುರಿತು.**

**ಠರಾವು:**

ವಿಸ್ತೃತ ಚರ್ಚೆಯ ನಂತರ, 2013–14 ನೇ ಸಾಲಿನ ಪರಿಷ್ಕೃತ ವಿವಿಧ ಬೀಜೋತ್ಪಾದನಾ ಕಾರ್ಯಕ್ರಮಗಳು ಮತ್ತು ಬೀಜ ಗ್ರಾಮ ಯೋಜನೆಗಳು ಹಾಗೂ 2014–15 ಸಾಲಿನ ವಿವಿಧ ಬೀಜೋತ್ಪಾದನಾ ಕಾರ್ಯಕ್ರಮಗಳ ಯೋಜನೆಗಳ ಅನುಷ್ಠಾನಕ್ಕೆ ಬೇಕಾಗುವ ಹಣಕಾಸಿನ ಪ್ರಸ್ತಾವನೆಗೆ ಮಾನ್ಯ ವ್ಯವಸ್ಥಾಪನಾ ಮಂಡಳಿಯು ಅನುಮೋದನೆ ನೀಡಿತು.

ಕೃವಿವಿ ರಾಯಚೂರು ಉತ್ಪಾದಿಸಿ ವಿಶ್ವವಿದ್ಯಾಲಯದ ಮಳಿಗೆಗಳಲ್ಲಿ ರೈತರಿಗೆ ಮಾರಾಟ ಮಾಡುವ ಬೀಜಗಳಿಗೆ ಶೇಕಡ 50 ರಷ್ಟು ಸಬ್ಸಿಡಿ ನೀಡುವಂತೆ ಕುಲಪತಿಗಳು ಪ್ರಸ್ತಾಪಿಸಿದಾಗ, ಅದಕ್ಕೆ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕೃಷಿ ಆಯುಕ್ತರು ತಮ್ಮ ಒಪ್ಪಿಗೆಯನ್ನು ಸೂಚಿಸಿದರು ಮತ್ತು ಈ ದಿಸೆಯಲ್ಲಿ ಸರಕಾರದಿಂದ ಆದೇಶ ಹೊರಡಿಸಲಾಗುವುದೆಂದು ತಿಳಿಸಿದರು. (ಕ್ರಮ : ವಿಶೇಷಾಧಿಕಾರಿಗಳು (ಬೀಜ)

**ಐಟಂ–13 ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ಸಿಬ್ಬಂದಿಯವರಿಗೆ ವೈದ್ಯಕೀಯ ವೆಚ್ಚವನ್ನು ಹಿಂತಿರುಗಿ ಪಡೆಯಲು ಆಸ್ಪತ್ರೆಗೆ ಮಾನ್ಯತೆ ಕೊಡುವ ಕುರಿತು.**

**ಠರಾವು:**

ದೀರ್ಘ ಚರ್ಚೆಯ ನಂತರ, ಸರಕಾರದ ಅನುಮೋದಿತ ಆಸ್ಪತ್ರೆಗಳ ಯಾದಿಯಲ್ಲಿ ನಮೂದಿತವಾಗಿದ್ದರೆ ಮಾತ್ರ ಗುಲಬರ್ಗಾದ "ಸಿದ್ರಾಮೇಶ್ವರ ಕಣ್ಣಿನ ಆಸ್ಪತ್ರೆ" ಗೆ ಮಾನ್ಯತೆ ನೀಡಲು ಮಾನ್ಯ ವ್ಯವಸ್ಥಾಪನಾ ಮಂಡಳಿಯು ಅನುಮೋದನೆ ನೀಡಿತು. (ಕ್ರಮ : ಕುಲಸಚಿವರು)

**ಐಟಂ–14 ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ಮಾನ್ಯ ವ್ಯವಸ್ಥಾಪನಾ ಮಂಡಳಿಯ ಸದಸ್ಯರುಗಳು ಕೇಂದ್ರೀಯ ಹತ್ತಿ ಸಂಶೋಧನಾ ಸಂಸ್ಥೆ, ನಾಗಪುರದಲ್ಲಿ ಕೃಷಿ ವಸಂತ–2014 ದಲ್ಲಿ ಭಾಗವಹಿಸಿದ್ದನ್ನು ಸ್ಥಿರೀಕರಿಸುವ ಕುರಿತು**

**ಠರಾವು:**

ಚರ್ಚೆಯ ನಂತರ, ಮಾನ್ಯ ವ್ಯವಸ್ಥಾಪನಾ ಮಂಡಳಿಯ ಸದಸ್ಯರುಗಳು ಕೇಂದ್ರೀಯ ಹತ್ತಿ ಸಂಶೋಧನಾ ಸಂಸ್ಥೆ, ನಾಗಪುರದಲ್ಲಿ ಕೃಷಿ ವಸಂತ–2014 ದಲ್ಲಿ ಭಾಗವಹಿಸಿದ್ದನ್ನು ಸ್ಥಿರೀಕರಿಸಲಾಯಿತು.

(ಕ್ರಮ : ಕುಲಸಚಿವರು)

ಐಟಂ–15 ಕೃಷಿ ವಿಶ್ವವಿದ್ಯಾಲಯ ರಾಯಚೂರಿನಲ್ಲಿ ಶಿಕ್ಷಕರ ನೇಮಕಾತಿಗಾಗಿ ಅನುಮೋದನೆ ಕುರಿತು.

**ಠರಾವು:**

ಭಾರತೀಯ ಸಂವಿಧಾನದ ಅನುಚ್ಛೇದ 371(ಜೆ) ಕುರಿತು ಜಂಟಿ ಕಾರ್ಯದರ್ಶಿಗಳು, ಸಿಆಸುಇ ಅವರಿಂದ ತಿಳಿದುಕೊಂಡು ಅನುಚ್ಛೇದ 371(ಜೆ) ಅನ್ನು ವಿಸ್ತೃತವಾಗಿ ಪರಿಶೀಲಿಸಿದ ನಂತರ, ಕೃಷಿ ವಿಶ್ವವಿದ್ಯಾಲಯ ರಾಯಚೂರಿನಲ್ಲಿ ಶಿಕ್ಷಕ / ಶಿಕ್ಷಕೇತರ ಸಿಬ್ಬಂದಿಯವರ ನೇಮಕಾತಿಗಾಗಿ ಮೀಸಲಾತಿ ನಿಯಮಾವಳಿಗಳ ಹಾಗೂ ಅನುಚ್ಛೇದ 371(ಜೆ) ಅನುಸಾರ ಆದಷ್ಟು ಬೇಗನೆ ಪುನ: ಜಾಹಿರಾತುಪಡಿಸಲು ತೀರ್ಮಾನಿಸಲಾಯಿತು.

(ಕ್ರಮ : ಕುಲಸಚಿವರು)

ಕುಲಸಚಿವರು ಹಾಗೂ ವ್ಯವಸ್ಥಾಪನಾ ಮಂಡಳಿಯ ಸದಸ್ಯ–ಕಾರ್ಯದರ್ಶಿಯವರ ಧನ್ಯವಾದಗಳೊಂದಿಗೆ ಸಭೆಯು ಮುಕ್ತಾಯಗೊಂಡಿತು.

| | |
|---|---|
| ಸಹಿ /– 19–2–2014 | ಸಹಿ /– 19–2–2014 |
| **(ಬಿ.ವಿ. ಪಾಟೀಲ)** | **(ಬಿ.ಎಸ್. ಜನಗೌಡರ್)** |
| ಕುಲಪತಿಗಳು ಹಾಗೂ ಅಧ್ಯಕ್ಷರು | ಕುಲಸಚಿವರು ಹಾಗೂ ಸದಸ್ಯ–ಕಾರ್ಯದರ್ಶಿ |
| ವ್ಯವಸ್ಥಾಪನಾ ಮಂಡಳಿ, ಕೃವಿವಿ ರಾಯಚೂರು. | ವ್ಯವಸ್ಥಾಪನಾ ಮಂಡಳಿ, ಕೃವಿವಿ ರಾಯಚೂರು. |

**(ಬಿ.ಎಸ್. ಜನಗೌಡರ್)**
ಕುಲಸಚಿವರು ಹಾಗೂ ಸದಸ್ಯ–ಕಾರ್ಯದರ್ಶಿ
ವ್ಯವಸ್ಥಾಪನಾ ಮಂಡಳಿ, ಕೃವಿವಿ ರಾಯಚೂರು.